ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

3

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE 27/09/2020

**ಮುಜುಗರ** ಆಡಳಿತ ಪಕ್ಷದ ಸದಸ್ಯರ ಕೊರತೆ: ಬಿದ್ದುಹೋದ ಮಸೂದೆ

# ಕೈಗಾರಿಕೆ ವಿವಾದ ಮಸೂದೆ ಮೇಲ್ಮನೆಯಲ್ಲಿ ತಿರಸ್ಕಾರ

• **ಕನ್ನಡಪ್ರಭ ವಾರ್ತೆ** ವಿಧಾನ ಪರಿಷತ್

'ಕೈಗಾರಿಕಾ ವಿವಾದಗಳು ಮತ್ತು ಇತರ ಕೆಲವು ಕಾನೂನುಗಳ ತಿದ್ದುಪಡಿ ವಿಧೇಯಕ 2020' ಅಂಗೀಕಾರ ಸಂಬಂಧ ನಡೆದ ಮತದಾನದಲ್ಲಿ ಆಡಳಿತ ಪಕ್ಷದ ಸದಸ್ಯರ ಸಂಖ್ಯೆ ಕಡಿಮೆ ಇದ್ದ ಹಿನ್ನೆಲೆಯಲ್ಲಿ ವಿಧೇಯಕ ವಿಧಾನ ಪರಿಷತ್‌ನಲ್ಲಿ ಬಿದ್ದುಹೋಯಿತು.

ಈ ವಿಧೇಯಕದ ಸಂಬಂಧ ಪರ ಹಾಗೂ ವಿರೋಧ ವಾದಗಳ ನಡುವೆ ಆರಂಭವಾದ ಗದ್ದಲದ ನಡುವೆ ಸಭಾಪತಿ ಕೆ. ಪ್ರತಾಪ್ ಚಂದ್ರ ಶೆಟ್ಟಿ ಅವರು ವಿಧೇಯಕವನ್ನು ಮತಕ್ಕೆ ಹಾಕಿದರು. ಈ ವೇಳೆ ವಿಧೇಯಕದ ಪರ 14 ಮತ ಹಾಗೂ ವಿರುದ್ಧ 26 ಮತಗಳು ಬಿದ್ದವು. ಹೀಗಾಗಿ ವಿಧೇಯಕ ಅಂಗೀಕಾರವಾಗದೆ ಆಡಳಿತ ಪಕ್ಷ ಮುಜುಗರಕ್ಕೆ ಗುರಿಯಾಯಿತು. ಇದಕ್ಕೂ ಮುನ್ನ ಕಾರ್ಮಿಕ ಸಚಿವ ಶಿವರಾಮ ಹೆಬ್ಬಾರ್ ಈ ವಿಧೇಯಕವನ್ನು ಮಂಡಿಸಿ, ಈ ಹಿಂದೆ ಕಾರ್ಖಾನೆಗಳಲ್ಲಿ 100ಕ್ಕಿಂತ ಹೆಚ್ಚಿನ ಕಾರ್ಮಿಕರನ್ನು ಉದ್ಯೋಗದಿಂದ ಕೆಲಸಕ್ಕೆ ತೆಗೆಯಲು ಸರ್ಕಾರದ ಅನುಮತಿ ಪಡೆಯಬೇಕಿತ್ತು. ಈಗ ಆ ಸಂಖ್ಯೆಯನ್ನು 300ಕ್ಕೆ ಹೆಚ್ಚಿಸಲಾಗಿದೆ. ಇನ್ನು ಕಾರ್ಮಿಕರ ಅವಧಿ ಮೀರಿದ ಕೆಲಸ (ಓಟಿ) ಸಮಯ ಹೆಚ್ಚಿಸಲಾಗಿದೆ ಎಂದರು.



**ವಿಧೇಯಕದಲ್ಲಿ ಕೆಲ ಬದಲಾವಣೆ ಅಗತ್ಯ:** ಬಿಜೆಪಿಯ ಆಯನೂರು ಮಂಜುನಾಥ ಅವರು, ಒಬ್ಬ ವ್ಯಕ್ತಿಗೆ 8 ಗಂಟೆ ಕೆಲಸದ ಅವಧಿ ನಿಗದಿಗೊಳಿಸಲಾಗಿದೆ. ಓವರ್ ಟೈಂ ಕೆಲಸ ಮಾಡುವುದರಿಂದ ಆತನ ದೈಹಿಕ ಕ್ಷಮತೆ ಹಾಳಾಗುತ್ತದೆ. ಹೀಗಾಗಿ ಈ ವಿಧೇಯಕದಲ್ಲಿ ಕೆಲವೊಂದು ಬದಲಾವಣೆ ಮಾಡಬೇಕೆಂದು ಸಲಹೆ ನೀಡಿದರು. ತಿಪ್ಪೇಸ್ವಾಮಿ ಮಾತನಾಡಿ, ಕಾರ್ಖಾನೆ ಮಾಲಿಕರು ಇದನ್ನು ಅಸ್ತ್ರವಾಗಿ ಬಳಸಿಕೊಂಡು ಕಾರ್ಮಿಕರನ್ನು ಕೆಲಸದಿಂದ ತೆಗೆಯುತ್ತಾರೆ. ಹೀಗಾಗಿ ಯಾವುದೇ ಕಾರಣಕ್ಕೂ ಈ ವಿಧೇಯಕ ಮಂಡಿಸಬಾರದು ಎಂದು ಒತ್ತಾಯಿಸಿದರು.